## ನೇಮಕಾತಿ-2021

## ಅಧಿಸೂಚನೆ ಸಂಖ್ಯೆ: 08/ನೇಮಕಾತಿ-2/2021-22

## ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ ಮತ್ತು ಮಹಿಳಾ) ಹಾಗೂ ಸೇವೆಯಲ್ಲಿರುವವರು (ಮಿಕ್ಕುಳಿದ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ (ಸ್ಥಳೀಯ)ಹುದ್ದೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು.

**ಒಟ್ಟು ಹುದ್ದೆಗಳು:402**

- ಅರ್ಜಿಗಳನ್ನು ಆನ್-ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ.
- ಅರ್ಜಿದಾರರು ಅಧಿಸೂಚನೆಯಲ್ಲಿ ನೀಡಲಾಗಿರುವ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ ಮತ್ತು ಮಹಿಳಾ) ಹಾಗೂ ಸೇವೆಯಲ್ಲಿರುವವರು (ಮಿಕ್ಕುಳಿದ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಮೀಸಲಾತಿ ವರ್ಗೀಕರಣವನ್ನು ನೋಡಿ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ.
- ಅರ್ಜಿದಾರರು ಹೊಸ ಅರ್ಜಿಯನ್ನು ಸಲ್ಲಿಸುವ ಮೊದಲು ಇಂಟರ್‌ನೆಟ್‌ನಲ್ಲಿ ಹೊಸದಾಗಿ BROWSERನ್ನು ತರೆದು ಅರ್ಜಿಯನ್ನು ತುಂಬಬೇಕು. ಅರ್ಜಿಯನ್ನು ಪೂರ್ಣಗೊಳಿಸಿದ ನಂತರ ತೆರೆದಿರುವ BROWSERನ್ನು ಮುಕ್ತಾಯಗೊಳಿಸಬೇಕು. ಉದಾಹರಣೆ: ಇತರರು ತೆರೆದಿರುವ ಅಥವಾ ಅರ್ಜಿಯನ್ನು ಸಲ್ಲಿಸಿ BROWSERನ್ನು ಮುಕ್ತಾಯ ಮಾಡದೆ ಹೋಗಿರುವ BROWSERನಲ್ಲಿ ಅರ್ಜಿದಾರರು ಹೊಸ ಅರ್ಜಿಯನ್ನು ಸಲ್ಲಿಸದಂತೆ ಸೂಚಿಸಲಾಗಿದೆ.
- **ಆನ್-ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ** :

  ಅರ್ಜಿದಾರ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ current recruitment ನ ಮೇಲೆ ಕ್ಲಿಕ್ ಮಾಡಿ ನಂತರ POLICE RECRUITMENT-2021ಕ್ಲಿಕ್ ಮಾಡಿ ಅಥವಾ http://psi21.ksp-online.in/ ಅಥವಾ http://rec21.ksp-

online.inಅಥವಾ https://recruitment.ksp.gov.inನಲ್ಲಿ Online recruitment application/ ನೇಮಕಾತಿ ಆನ್‌ಲೈನ್ ಅರ್ಜಿಗಳ ಮೇಲೆ ಕ್ಲಿಕ್ ಮಾಡಿ ಅರ್ಜಿ ಸಲ್ಲಿಸುವ ಮೊದಲು ಮಾಹಿತಿ ಸೂಚಿ/ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿಮಾಡಬೇಕು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ, ಎಡಗೈ ಹೆಬ್ಬೆಟ್ಟಿನ ಗುರುತು ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ ೮(ಬಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ(Soft Copy - less than 250 KB)ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ ಮತ್ತು ಇತ್ಯಾದಿ ವಿವರಗಳನ್ನು ಭರ್ತಿಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ , ಎಡಗೈ ಹೆಬ್ಬೆಟ್ಟಿನ ಗುರುತು ಮತ್ತು ಸಹಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿ ತ್ರಿಪತಿ (Triplicate) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ಹುದ್ದೆ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಕೆ–ಕೆ / ನಾನ್ ಕೆ–ಕೆ ಪ್ರದೇಶದ ಮೀಸಲಾತಿ ಮಾಹಿತಿ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತದೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

- ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಶುಲ್ಕವನ್ನು ನಗದು ರೂಪದಲ್ಲಿಯೇ ಅಧಿಕೃತ ಹೆಚ್‌ಡಿಎಫ್‌ಸಿ ಬ್ಯಾಂಕ್ ಅಥವಾ ಅಂಚೆ ಕಛೇರಿ ಶಾಖೆಗಳಲ್ಲಿ ಪಾವತಿಸಬೇಕಾಗಿರುತ್ತದೆ. ಶುಲ್ಕ ಪಾವತಿಸಿದ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು ಹಾಗೂ ಆನ್‌ಲೈನ್ ಮುಖಾಂತರ ಹಣ ಪಾವತಿಸಬಹುದಾಗಿದೆ.
- ಅಭ್ಯರ್ಥಿಯು ಶುಲ್ಕ ಪಾವತಿಸಿದ ಮರುದಿನ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.inಅಥವಾ http://psicivilnhk21.ksp-online.in/ ನಲ್ಲಿ My Application ನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ

ನಂತರವೇ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಭರ್ತಿ ಮಾಡಿದ ಆನ್-ಲೈನ್ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

- ಆನ್-ಲೈನ್ ಮುಖಾಂತರ ದಿನಾಂಕ: 01.04.2021 ರಂದು ಬೆಳಗ್ಗೆ 10-00 ಗಂಟೆಯಿಂದ ದಿನಾಂಕ: 03.05.2021ರ ಸಂಜೆ 06.00 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸಲು ದಿನಾಂಕ: 05/05/2021 ರಂದು ಕೊನೆಯ ದಿನಾಂಕವಾಗಿರುತ್ತದೆ. ಶುಲ್ಕವನ್ನು ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು. ಒಂದು ದಿನದ ನಂತರ ಅರ್ಜಿಯ ಪ್ರತಿಯನ್ನು ಮುದ್ರಿಸಿಕೊಳ್ಳತಕ್ಕದ್ದು.

- ನೇಮಕಾತಿಗೆ ಸಂಬಂಧಪಟ್ಟ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.inಅಥವಾ http://psicivilnhk21.ksp-online.in/ನ ಅಥವಾ https://recruitment.ksp.gov.inಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ. ಉದಾಹರಣೆ: ಅರ್ಜಿ ಯಶಸ್ವಿಯಾಗಿರುವ ಕುರಿತು, ಅರ್ಹತಾ ಪಟ್ಟಿ, ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಕರೆಪತ್ರ/ಲಿಖಿತ ಪರೀಕ್ಷೆಯ ದಿನಾಂಕ, ಕರೆಪತ್ರಗಳು/ವೈದ್ಯಕೀಯ ಪರೀಕ್ಷೆಯ ದಿನಾಂಕ, ಕರೆಪತ್ರಗಳು ಇತ್ಯಾದಿ,
- ಅರ್ಜಿದಾರರನು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಲು ಗಣಕಯಂತ್ರದಲ್ಲಿ ಅಂತರ್ಜಾಲದ SOFTWARE, Internet Explorer 8 or 9, or Google Chroma or Firefox ಅಳವಡಿಸಿಕೊಂಡಿರಬೇಕು.
- ಗಣಕಯಂತ್ರದ ಪರದೆಯ ಮೇಲೆ ಚಿತ್ತರಿಸಿರುವ ಕನ್ನಡದ ಅಕ್ಷರಗಳು ನುಡಿ ತಂತ್ರಾಂಶವನ್ನು ಬಳಸಿ ಬರೆಯಲಾಗಿದೆ, ಕನ್ನಡ ಅಕ್ಷರಗಳು ಗಣಕಯಂತ್ರದಲ್ಲಿ JUNK CHARACTER ರೂಪದಲ್ಲಿ ಗಣಕಯಂತ್ರದ ಪರದೆಯ ಮೇಲೆ ಮೂಡಿದರೆ, ಅದನ್ನು ಸರಿಪಡಿಸಲು ಗಣಕಯಂತ್ರದಲ್ಲಿ NUDI SOFTWARE ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

- **ಅರ್ಜಿ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ ಹಾಗೂ ಶುಲ್ಕ ಪಾವತಿಸಲು ಕೊನೆಯ ದಿನಾಂಕ:**
  1. **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 01/04/2021, ಬೆಳಗ್ಗೆ 10:00 ಗಂಟೆಯಿಂದ.**
  2. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 03/05/2021, ಸಂಜೆ 06:00 ಗಂಟೆವರೆಗೆ.**
  3. **ಶುಲ್ಕವನ್ನು ಅಧಿಕೃತ ಬ್ಯಾಂಕ್ ಶಾಖೆಗಳ ಕಛೇರಿ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 05/05/2021.**

  - ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸುವುದು.
  - ಅರ್ಜಿ ಪೂರ್ಣಗೊಳಿಸಿದ ನಂತರ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸುವಂತೆ ಸೂಚಿಸಲಾಗಿದೆ.
  - ಶುಲ್ಕ ಪಾವತಿಸಿದ ಮರುದಿನ/ಎರಡು ದಿನದ ನಂತರ ಅರ್ಜಿಯ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಲು ಸೂಚಿಸಲಾಗಿದೆ.
  - ಶುಲ್ಕವನ್ನು ಹೆಚ್‌ಡಿಎಫ್‌ಸಿ ಬ್ಯಾಂಕಿನಲ್ಲಿ ಅಥವಾ ಅಂಚೆ ಕಛೇರಿಗಳಲ್ಲಿ ಹಾಗೂ ಆನ್‌ಲೈನ್ ಮುಖಾಂತರ ಪಾವತಿಸತಕ್ಕದ್ದು. ಬೇರೆ ಯಾವುದೇ ಬ್ಯಾಂಕಿನಲ್ಲಿ ಶುಲ್ಕ ಪಾವತಿಸಲು ಅವಕಾಶವಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ಯಾವುದೇ ಸ್ವರೂಪದಲ್ಲಿ ಶುಲ್ಕ ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
  - ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆ ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: 080-22943346 ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿಯನ್ನು ಸಲ್ಲಿಸಬಹುದು.
  - ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಗಳಗೂ ಹಿಂದಿರುಗಿಸಲಾಗುವುದಿಲ್ಲ ಮತ್ತು ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.
  - ಮೀಸಲಾತಿ ಕೋರುವ ಪ್ರಮಾಣ ಪತ್ರಗಳು ಅಧಿಸೂಚನೆಯಲ್ಲಿ ನಮೂದಿಸಿರುವಂತಹ ನಿಯಮಗಳ ನಮೂನೆಯಲ್ಲಿಯೇ ಇರಬೇಕು. ಸದರಿ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು.

- ಯಾವುದೇ ದಾಖಲೆಗಳನ್ನು ಅಂಚೆ ಮೂಲಕವಾಗಲಿ ಅಥವಾ ಮುದ್ದಾಂ ಆಗಿ ಸಲ್ಲಿಸತಕ್ಕದ್ದಲ್ಲ.
- ಮೀಸಲಾತಿಯನ್ನು ಕೋರ ಬಯಸುವ ಅರ್ಜಿದಾರರುಗಳು ಆನ್‌ಲೈನ್ ಅರ್ಜಿಯಲ್ಲಿ ಮೀಸಲಾತಿ ಸೌಲಭ್ಯಕ್ಕಾಗಿ ಇರುವ ಅಂಕಣವನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು. ಅಂಕಣವನ್ನು ಖಾಲಿ ಬಿಟ್ಟಿದ್ದಲ್ಲಿ ಸಾಮಾನ್ಯ ವರ್ಗ ಎಂದು ಪರಿಗಣಿಸಲಾಗುವುದು. ನಂತರ ಯಾವುದೇ ಹಂತದಲ್ಲಿ ಮೀಸಲಾತಿಯನ್ನು ಸೇರ್ಪಡೆ ಮಾಡಲು ಅವಕಾಶವಿರುವುದಿಲ್ಲ. ಒಂದು ವೇಳೆ ತಪ್ಪಾಗಿ ನಮೂದಿಸಿದ್ದರೆ, ನಂತರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅರ್ಜಿದಾರರು ಅರ್ಹತೆ ಹೊಂದಿದಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಗಳೆಂದು ಪರಿಗಣಿಸಲಾಗುವುದು.
- ಆಯ್ಕೆಯಾಗಿರುವ ಎಲ್ಲಾ ಅರ್ಹ ಅಭ್ಯರ್ಥಿಗಳು ದಾಖಲೆ ಪರಿಶೀಲನೆ ಸಮಯದಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿಯನ್ನು ಹಾಗೂ ನಿಗದಿತ ಶುಲ್ಕವನ್ನು ಪಾವತಿಸಿರುವ ಚಲನ್‌ನ ಅಭ್ಯರ್ಥಿ ಪ್ರತಿಯನ್ನು ತಪ್ಪದೇ ಹಾಜುರುಪಡಿಸತಕ್ಕದ್ದು. ತಪ್ಪಿದಲ್ಲಿ ದಾಖಲೆ ಪರಿಶೀಲನೆಗೆ ಪರಿಗಣಿಸಲಾಗುವುದಿಲ್ಲ.
- ನಿಗದಿತ ಶುಲ್ಕವನ್ನು ಬ್ಯಾಂಕ್/ಅಂಚೆ ಕಛೇರಿಯಲ್ಲಿ ಪಾವತಿಸಿದ ನಂತರ, ಬ್ಯಾಂಕ್ / ಅಂಚೆ ಕಛೇರಿ ಸಿಬ್ಬಂದಿಯವರು ಬ್ರಾಂಚ್‌ಕೋಡ್, ಜರ್ನಲ್ ಸಂಖ್ಯೆ, ಶುಲ್ಕ ಸಂದಾಯವಾದ ದಿನಾಂಕ ಮತ್ತು ಶುಲ್ಕ ಸ್ವೀಕರಿಸಿರುವವರ ಸಹಿಯೊಂದಿಗೆ ಮಾಹಿತಿಯನ್ನು ಸರಿಯಾಗಿ ನಮೂದಿಸಿರುವರೆಂದು ಅರ್ಜಿದಾರರು ಖಾತ್ರಿ ಪಡಿಸಿಕೊಳ್ಳಲು ಸೂಚಿಸಲಾಗಿದೆ.
- ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡಿದ ನಂತರ ನಿಗದಿತ ಶುಲ್ಕ ಪಾವತಿಸಲು ಸೃಜನೆಯಾಗುವ ಬ್ಯಾಂಕ್ ಚಲನ್ ಮತ್ತು ಪೂರ್ಣಗೊಳಿಸಿದ ಅರ್ಜಿಯನ್ನು ಗಣಕಯಂತ್ರದ ಪರದೆಯ ಮೇಲೆ ಭಿತ್ತರಿಸಲು ಗಣಕಯಂತ್ರದಲ್ಲಿ PDF Reader Software ಅಳವಡಿಸಿರಬೇಕು. ಇಲ್ಲದಿದ್ದಲ್ಲಿ PDF Reader Software ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.
- ಮೊಬೈಲ್ ಪೋನ್ (Android / smart phone) ಬಳಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.
- ಮೊಬೈಲ್ ಪೋನ್ (Android / smart phone) ಬಳಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವ ಮೊದಲಿಗೆ ಭಾವಚಿತ್ರ, ಸಹಿ, ಗುರುತಿನ ಚೀಟಿ, ಹೆಬ್ಬೆಟ್ಟಿನ ಗುರುತು ಮತ್ತು ಮಾಜಿ

ಸೈನಿಕ ಅವಲಂಬಿತ ಪ್ರಮಾಣಪತ್ರವನ್ನು ಈ ಕೆಳಗಿನಂತೆ ಸಿದ್ಧವಾಗಿಟ್ಟುಕೊಂಡು ಅಪ್‌ಲೋಡ್ ಮಾಡತಕ್ಕದ್ದು.

- ಭಾವಚಿತ್ರ (ಕಲರ್) : 400 X 400 pixel, size =< 250KB
- ಸಹಿ ( ಕಪ್ಪು ಶಾಯಿ) : 400X 400 pixel, size =< 250 KB
- ಎಡಗೈ ಹೆಬ್ಬೆಟ್ಟಿನ ಗುರುತು : 400X 400 pixel, size =< 250 KB
- ಗುರುತಿನ ಚೀಟಿ : 400X 400 pixel, size =< 250 KB
- ಮಾಜಿ ಸೈನಿಕ ಅವಲಂಬಿತ ಪ್ರಮಾಣ ಪತ್ರ(ಸೈನಿಕ್ ಬೋರ್ಡ್‌ನಿಂದ ಪಡೆದ): 400X 400 pixel, size =< 250 KB gif, jpg, jpeg and png ಫಾರಮೆಟ್‌ನಲ್ಲಿರ ತಕ್ಕದ್ದು.

**ಅರ್ಜಿ ಸಲ್ಲಿಸ ಬಯಸುವ ಅರ್ಜಿದಾರರುಗಳು ಈ ಕೆಳಕಂಡ ಪ್ರಮಾಣ ಪತ್ರ, ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ (03/05/2021) ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಚಾಲ್ತಿಯಲ್ಲಿರಬೇಕು:**

- ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳು.
- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಕೋರುವ ಅರ್ಜಿದಾರರುಗಳು ತಹಶೀಲ್ದಾರ್‌ರಿಂದ ಪಡೆದ ನಮೂನೆ ಡಿ/ಇ/ಎಫ್ ಪ್ರಮಾಣ ಪತ್ರಗಳು.

  **ಕೆಳಕಂಡ ದಾಖಲೆಗಳನ್ನು ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂಧರ್ಭದಲ್ಲಿ ಪಡೆದುಕೊಂಡಿದ್ದು, ಆಯ್ಕೆ ಪ್ರಾಧಿಕಾರವು ಸೂಚಿಸಿದ ಸಂದರ್ಭದಲ್ಲಿ ಹಾಜರುಪಡಿಸತಕ್ಕದ್ದು.**
- ಸರ್ಕಾರಿ ಇಲಾಖೆಯಲ್ಲಿ (ರಾಜ್ಯಸರ್ಕಾರದ ಅಥವಾ ಕೇಂದ್ರ ಸರ್ಕಾರದ)/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ /ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾವತಿಯಿಂದ ನೀಡಲಾಗುವ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ/ ನಿರಾಪೇಕ್ಷಣ ಪ್ರಮಾಣಪತ್ರ.
- ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅರ್ಜಿದಾರರುಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ
- ಮಾಜಿಸೈನಿಕ ಮೀಸಲಾತಿ ಕೋರುವ ಮಾಜಿ ಸೈನಿಕ ಅರ್ಜಿದಾರರು ಸೈನ್ಯ ವಿಯೋಜನೆ ಪ್ರಮಾಣಪತ್ರ/ನಿರಾಪೇಕ್ಷಣಾ ಪ್ರಮಾಣಪತ್ರ ( Discharge Certificate/NOC)

- ಮಾಜಿಸೈನಿಕರು ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ, ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪಡೆದ ಪ್ರಮಾಣಪತ್ರ.
- ಗ್ರಾಮೀಣ ಮೀಸಲಾತಿ ಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂದಪಟ್ಟ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರುವ ಪ್ರಮಾಣಪತ್ರ.
- ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂದಪಟ್ಟ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿಟ್ಟುಕೊಂಡಿರುವ ಪ್ರಮಾಣಪತ್ರ.
- **ಕಲ್ಯಾಣ-ಕರ್ನಾಟಕ ಪ್ರದೇಶಕ್ಕೊಳಪಡುವ (ಸ್ಥಳೀಯ) ಅಭ್ಯರ್ಥಿಗಳು ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**
  **ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ.ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ-ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.**
- ಮಾಹಿತಿ ಭರ್ತಿ ಮಾಡುವ ಮುನ್ನ ಬಿಳಿ ಹಾಳೆಯ ಮೇಲೆ ತಮ್ಮ ಇತ್ತೀಚಿನ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ Scan ಮಾಡಿಕೊಂಡಿರತಕ್ಕದ್ದು.
- ಭಾವಚಿತ್ರ (ಕಲರ್) : 400 X 400 pixel, size =< 250KB
- ಸಹಿ ( ಕಪ್ಪು ಶಾಯಿ) : 400X 400 pixel, size =< 250 KB
- ಎಡಗೈ ಹೆಬ್ಬೆಟ್ಟಿನ ಗುರುತು : 400X 400 pixel, size =< 250 KB

- ಗುರುತಿನ ಚೀಟಿ : 400X 400 pixel, size =< 250 KB
- ಮಾಜಿ ಸೈನಿಕ ಅವಲಂಬಿತ ಪ್ರಮಾಣ ಪತ್ರ(ಸೈನಿಕ್ ಬೋರ್ಡ್‌ನಿಂದ ಪಡೆದ): 400X 400 pixel, size =< 250 KB gif, jpg, jpeg and png ಫಾರಮೆಟ್‌ನಲ್ಲಿರ ತಕ್ಕದ್ದು.

**ಸೂಚನೆ:-**

**ಎ) ಅರ್ಹತಾ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು**

**ಬಿ) ಕಲ್ಯಾಣ-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.**

**ಸಿ) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.**

**ಡಿ) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ, ಆ ಮೀಸಲಾತಿಯನ್ನು ರದ್ದು ಪಡಿಸಲಾಗುವುದು ಹಾಗೂ ಕೋರಲಾದ ಜಾತಿ/ಪಂಗಡ/ಪ್ರವರ್ಗಕ್ಕೆ ಸಂಬಂಧಿಸಿದಂತೆ, ಪ್ರಮಾಣ ಪತ್ರವನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ಸಾಮಾನ್ಯ ವರ್ಗದಡಿಯಲ್ಲಿ ಅರ್ಹತೆ ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.**

**ಪ್ರಮುಖವಾದ ಸೂಚನೆಗಳು:**

- ಅರ್ಹಗೊಂಡ ಅಭ್ಯರ್ಥಿಗಳಿಗೆ ಅಂಚೆ ಮುಖಾಂತರ ಕರೆಪತ್ರವನ್ನು ರವಾನಿಸಲಾಗುವುದಿಲ್ಲ. ವೆಬ್‌ಸೈಟ್ ಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ.
- ಆನ್‌ಲೈನ್ ಮೂಲಕ ಅರ್ಜಿಯಲ್ಲಿ ಸಲ್ಲಿಸಿರುವ ಮಾಹಿತಿಗಳನ್ನೇ ಆಧಾರವಾಗಿಟ್ಟುಕೊಂಡು ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದರಿಂದ ಯಾವುದೇ ಅಂಶಗಳ ಬದಲಾವಣೆ ಮಾಡಿದ ನಂತರ ಅಭ್ಯರ್ಥಿಯು ನೀಡಿದ ಮಾಹಿತಿಯು ಅಪೂರ್ಣ / ಅಸ್ಪಷ್ಟ / ತಪ್ಪು ಎಂದು ಕಂಡು ಬಂದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.
- ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ

ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಮ್ಮೆ ಅದೇ ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತುಕ್ರಮಕ್ಕೆ ಒಳ ಪಡುವುದಲ್ಲದೇ ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

- ಯಾವುದೇ ಅರ್ಜಿದಾರರು ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು. ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ / ಖುಲಾಸೆಯಾಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದು ಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.

<u>ವಿಶೇಷ ಸೂಚನೆಗಳು:-</u>

ಎ) ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದದ ಹುದ್ದೆ ಹಾಗೂ ಮಿಕ್ಕುಳಿದ ವೃಂದದ (ಪರಸ್ಥಳೀಯ) ಹುದ್ದೆ ಈ ಎರಡೂ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಬಿ) ಒಂದು ವೇಳೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಯು ಪ್ರಸ್ತುತ ನೇಮಕಾತಿಗೆ ಸಂಬಂಧಿಸಿದಂತೆ ಮಿಕ್ಕುಳಿದ (ಪರಸ್ಥಳೀಯ) ವೃಂದದ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ನೇಮಕಾತಿ ಹೊಂದಿದಲ್ಲಿ ಅಂತಹ ಅಭ್ಯರ್ಥಿಯು ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾ ಅವಧಿಯಲ್ಲಿ ಅನುಚ್ಛೇದ 371ಜೆ ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟೀಕರಿಸಲಾಗಿದೆ.

ಸಿ) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೆ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ

ಕಾರ್ಲ್‌ಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ಡಿ) ಪ್ರತಿಭಾನ್ವಿತ ಕ್ರೀಡಾಪಟುಗಳಿಗೆ ನೇರ ನೇಮಕಾತಿಗಳಲ್ಲಿ 2% ರಷ್ಟು ಹುದ್ದೆಗಳನ್ನು ಮೀಸಲಿರಿಸುವ ಸಂಬಂಧ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿರುತ್ತದೆ. ಆದ್ದರಿಂದ ಮಿಕ್ಕುಳಿದ ವೃಂದದ ಹುದ್ದೆಗಳಲ್ಲಿ 2% ರಂತೆ 08 ಹುದ್ದೆಗಳು ಹಾಗೂ ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ಹುದ್ದೆಗಳಲ್ಲಿ 01 ಹುದ್ದೆಯನ್ನು ಮೀಸಲಿರಿಸಲಾಗಿದ್ದು(ಅಂತಿಮ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊರಡಿಸುವ ಷರತ್ತಿಗೊಳಪಟ್ಟು), ಸದರಿ ಹುದ್ದೆಗಳ ನೇಮಕಾತಿ ಸಲುವಾಗಿ ಪ್ರತ್ಯೇಕವಾದ ನೇಮಕಾತಿ ಅಧಿಸೂಚನೆಯನ್ನು ಪ್ರಕಟಿಸಲಾಗುವುದು.

ಶುಲ್ಕ:

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ₹. 500/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ₹. 250/- |